ದೇವನಹಳ್ಳಿ ಕ್ಷೇತ್ರದಲ್ಲಿ ಕೆ.ಇ.ಬಿ. ಸಬ್-ಸ್ಟೇಷನ್ ಮಂಜೂರಾತಿ.

952(1363) ಶ್ರೀ ಜಿ. ಚಂದ್ರಣ್ಣ (ದೇವನಹಳ್ಳಿ):— ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ದೇವನಹಳ್ಳಿ ಕ್ಷೇತ್ರದಲ್ಲಿನ ವಿದ್ಯುತ್ ಸಬ್-ಸ್ಟೇಷನ್ನು ಕ್ಲೋಸ್ ಮಾಡಲಾಗಿದೆಯೇ? ಹಾಗಿದ್ದಲ್ಲಿ, ಆ ಸ್ಥಳಗಳಾವುವು; (ದಯವಿಟ್ಟು ತಿಳಿಸುವಿರೇ).

ಆ) ಹಾಗೂ ಅವುಗಳಿಗೆ ಯಾವ ದಿನಾಂಕದಿಂದ ಅನುಮತಿ ನೀಡಲಾಗಿದೆ?

ಶ್ರೀ ಶರಣ ಬಸಪ್ಪ ದರ್ಶನಾಪುರ (ಇಂಧನ ರಾಜ್ಯ ಸಚಿವರು):—

ಅ) ಮತ್ತು ಆ) ದೇವನಹಳ್ಳಿ ಕ್ಷೇತ್ರದ ವಿದ್ಯಾನಗರದಲ್ಲಿ, ಒಂದು 66 : 11 ಕೆ.ವಿ. ವಿದ್ಯುತ್ ಸಬ್-ಸ್ಟೇಷನ್ನನ್ನು ಸುಮಾರು 484 ಲಕ್ಷ ರೂ. ಅಂದಾಜು ವೆಚ್ಚದಲ್ಲಿ ಸ್ಥಾಪಿಸಲು ಉದ್ದೇಶಿಸಿದೆ. ಅಲ್ಲದೇ ಈ ಕ್ಷೇತ್ರದ ಬೂದಿಗೆರೆಯಲ್ಲಿ, ಒಂದು 66 : 11 ಕೆ.ವಿ. ಸಬ್-ಸ್ಟೇಷನ್ ಸ್ಥಾಪಿಸುವ ಬಗ್ಗೆ ಪರಿಶೀಲಿಸಲಾಗುತ್ತದೆ. ವಿದ್ಯಾನಗರದಲ್ಲಿ ನಿರ್ಮಾಣ ಮಾಡಲು ಉದ್ದೇಶಿಸಿರುವ ವಿದ್ಯುತ್ ಸಬ್ ಸ್ಟೇಷನ್ನಿಗೆ ಈಗಾಗಲೇ ಮಂಡಳಿಯ ತಾಂತ್ರಿಕ ಸಮಿತಿಯಿಂದ ಏಪ್ರಿಲ್-1997 ರಲ್ಲಿ ಅನುಮೋದನೆ ನೀಡಲ್ಪಟ್ಟಿದೆ. ಈ ಕಾಮಗಾರಿಯನ್ನು ನಿರ್ವಹಿಸಲು ಗ್ರಾಮೀಣ ವಿದ್ಯುದೀಕರಣ ನಿಗಮದಿಂದ ಸಾಲ ಸೌಲಭ್ಯ ಪಡೆಯಲು ಪ್ರಯತ್ನಿಸಲಾಗುತ್ತಿದೆ. ಬೂದಿಗೆರೆಯಲ್ಲಿ, ಒಂದು 66 11 ಕೆ.ವಿ. ವಿದ್ಯುತ್ ವಿತರಣಾ ಕೇಂದ್ರದ ಸ್ಥಾಪನೆಯ ಬಗ್ಗೆ ವಿವರವಾದ ತಾಂತ್ರಿಕ ವರದಿಯನ್ನು ಪಡೆಯಲಾಗುತ್ತಿದೆ. ಈ ತಾಂತ್ರಿಕ ವರದಿಯನ್ನು ಪಡೆದ ನಂತರ, ಅದನ್ನು ಮಂಡಳಿಯ ತಾಂತ್ರಿಕ ಸಮಿತಿಯ ಮುಂದೆ ಮಂಡಿಸಿ ಸಮಿತಿಯು ತೆಗೆದುಕೊಳ್ಳುವ ತೀರ್ಮಾನದ ಪ್ರಕಾರ ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು.

ಇದಲ್ಲದೇ ದೇವನಹಳ್ಳಿ ಬಳಿಯಲ್ಲಿ, ಅಂತರ ರಾಷ್ಟ್ರೀಯ ವಿಮಾನ ನಿಲ್ದಾಣವನ್ನು ಸ್ಥಾಪಿಸುವುದಾದರೆ ಅದಕ್ಕೆ ವಿದ್ಯುತ್ ಪೂರೈಕೆಗಾಗಿ ಒಂದು 220 : 66 ಕೆ.ವಿ. ವಿದ್ಯುತ್ ಉಪ ಕೇಂದ್ರಗಳನ್ನು ರಚಿಸುವ ಉದ್ದೇಶವಿದ್ದು ಈ ಕಾಮಗಾರಿಗೆ ಫೆಬ್ರವರಿ 97 ರಲ್ಲಿ ಮಂಡಳಿಯ ತಾಂತ್ರಿಕ ಸಮಿತಿಯಿಂದ ಅನುಮೋದನೆ ಪಡೆಯಲಾಗಿದೆ.

ರಾಜ್ಯದ ಪೋಲೀಸ್ ಇಲಾಖೆಯಲ್ಲಿ ಖಾಲಿ ಇರುವ ಸಬ್ ಇನ್ಸ್‌ಪೆಕ್ಟರ್ ಹುದ್ದೆಗಳು.

953(1040) ಶ್ರೀ ಕೆ.ಎಸ್. ಈಶ್ವರಪ್ಪ (ಶಿವಮೊಗ್ಗ):— ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದ ಪೋಲೀಸ್ ಇಲಾಖೆಯ ವಿವಿಧ ವಿಭಾಗಗಳಲ್ಲಿ ಖಾಲಿ ಇರುವ ಸಬ್ ಇನ್ಸ್‌ಪೆಕ್ಟರ್ ಹುದ್ದೆಗಳ ಒಟ್ಟು ಸಂಖ್ಯೆ ಎಷ್ಟು ಈ ಹುದ್ದೆಗಳನ್ನು ತುಂಬಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?